# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಬಿ.ಎಸ್. ಶಿವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) ಇವರು ನಿಯಮ 330ರಡಿ ಗಮನ ಸೆಳೆದಿರುವ ಸೂಚನೆಯಲ್ಲಿ "ರಾಜ್ಯದ ಗ್ರಾಮೀಣ, ಮಲೆನಾಡು, ಗುಡ್ಡಗಾಡು **ಹಾಗೂ ಕಲ್ಯಾಣ ಕರ್ನಾಟಕದ ದೂರದ ಗ್ರಾಮಗಳು, ಲಂಬಾಣಿ, ತಾಂಡಾ ಮತ್ತು ಹಟ್ಟಿಗಳಲ್ಲಿ 'ಸಂಚಾರಿ ಆರೋಗ್ಯ ಘಟಕಗಳ' ಕೊರತೆ, ಸಿಬ್ಬಂದಿ ಹಾಗೂ ಔಷಧ ಅಭಾವ ನಿವಾರಿಸಿ ಸುಸಜ್ಜಿತ ಡಿಜಿಟಲ್ ಮೊಬೈಲ್ ಹೆಲ್ತ್ ಕ್ಲಿನಿಕ್‌ಗಳನ್ನು ವಿಸ್ತರಿಸುವ ಕುರಿತು** ಪ್ರಸ್ತಾಪಿಸಿರುವ ವಿಷಯಕ್ಕೆ ಸಂಬಂಧಿಸಿದಂತೆ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಹೇಳಿಕೆ.

**ಉತ್ತರ:**

ರಾಜ್ಯದ ಗ್ರಾಮೀಣ, ಮಲೆನಾಡು, ಗುಡ್ಡಗಾಡು ಹಾಗೂ ಕಲ್ಯಾಣ ಕರ್ನಾಟಕದ ದೂರದ ಗ್ರಾಮಗಳು, ಲಂಬಾಣಿ, ತಾಂಡಾ ಮತ್ತು ಹಟ್ಟಿಗಳನ್ನು ಒಳಗೊಂಡಂತೆ ರಾಜ್ಯದಲ್ಲಿ "ಸಂಚಾರಿ ಆರೋಗ್ಯ ಘಟಕ" ಗಳ ಸೇವೆಗಳನ್ನು ನೀಡಲು ಕೆಳಕಂಡ ಕ್ರಮಗಳನ್ನು ವಹಿಸಲಾಗಿದೆ.

ಕ್ಷೇತ್ರ ಮಟ್ಟದಲ್ಲಿ ದುರ್ಗಮ ಮತ್ತು ಸಂಪರ್ಕರಹಿತ ಪ್ರದೇಶಗಳು, ಹಿಂದುಳಿದ ವರ್ಗದ ಜನಸಂಖ್ಯೆಯುಳ್ಳ ಪ್ರದೇಶಗಳು ಹಾಗೂ ಆರೋಗ್ಯ ಸೇವೆಗಳಿಂದ ವಂಚಿತರಾಗಿರುವ ಪ್ರದೇಶಗಳನ್ನು (ಸಮೀಪದ ಆರೋಗ್ಯ ಉಪ ಕೇಂದ್ರ / ಪ್ರಾಥಮಿಕ ಆರೋಗ್ಯ ಕೇಂದ್ರಗಳಿಂದ ಐದು / ಹತ್ತು ಕಿಲೋ ಮೀಟರ್ ದೂರದ ಹಳ್ಳಿಗಳು / ಜನವಸತಿ ಪ್ರದೇಶಗಳು) ಗುರುತಿಸಲಾಗಿದ್ದು, ಈ ಪ್ರದೇಶಗಳಲ್ಲಿ ಮೂಲಭೂತ ಆರೋಗ್ಯ ಸೇವೆಗಳಾದ 12 ವಿಸ್ತ್ರತ ಪ್ಯಾಕೇಜ್ ಸೇವೆಗಳನ್ನು ಹಾಗೂ ಪ್ರಾಥಮಿಕ ಆರೋಗ್ಯ ವೈದ್ಯಕೀಯ ಸೇವೆಗಳನ್ನು ಸಂಚಾರಿ ಆರೋಗ್ಯ ಘಟಕಗಳ ಮುಖಾಂತರ ನೀಡಲಾಗುತ್ತಿದೆ.

ದುರ್ಗಮ/ಸಂಪರ್ಕ ರಹಿತ ಪ್ರದೇಶಗಳಿಗೆ ಸಂಚಾರಿ ಆರೋಗ್ಯ ಘಟಕಗಳ ಸೇವೆಗಳನ್ನು ನೀಡಲು ಮಾನದಂಡಗಳು ಕೆಳಗಿನಂತಿವೆ.

- 50,000ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು.
- ಆರೋಗ್ಯ ಉಪಕೇಂದ್ರಗಳಿಂದ 5 ಕಿ.ಮೀ.ಗಿಂತ ಹೆಚ್ಚು ದೂರದಲ್ಲಿರುವ ಗ್ರಾಮಗಳು.
- PHC/CHCಗಳಿಂದ 10 ಕಿ.ಮೀ. ಗಿಂತ ಹೆಚ್ಚು ದೂರದಲ್ಲಿರುವ ಗ್ರಾಮಗಳು.
- ಅರಣ್ಯ ಪ್ರದೇಶಗಳು ಮತ್ತು ಗುಡ್ಡಗಾಡು ಪ್ರದೇಶಗಳು.

ಈ ಮೇಲ್ಕಂಡ ಮಾನದಂಡಗಳ ಆಧಾರದ ಮೇಲೆ "ಆರೋಗ್ಯ ಸೇತು" ಹೆಸರಿನಲ್ಲಿ 57 ಸಂಚಾರಿ ಆರೋಗ್ಯ ಘಟಕಗಳನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನ ಮತ್ತು ರಾಜ್ಯ ಸರ್ಕಾರದ ಎಸ್.ಸಿ.ಎಸ್.ಪಿ & ಟಿ.ಎಸ್.ಪಿ ಅನುದಾನದಡಿಯಲ್ಲಿ ಕಾರ್ಯಾಚರಣೆ ಮಾಡಲಾಗುತ್ತಿದೆ.

ಸಂಚಾರಿ ಆರೋಗ್ಯ ಘಟಕಗಳನ್ನು ಜಿಲ್ಲಾ ಮಟ್ಟದಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ವಾಹನವನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆಯಲಾಗುವುದು, ಮಾನವ ಸಂಪನ್ಮೂಲಗಳಾದ ಎಂ.ಬಿ.ಬಿ.ಎಸ್ ವೈದ್ಯರುಗಳು, ಶುಶ್ರೂಷಕ / ಶುಶ್ರೂಷಕಿಯರು, ಪ್ರಯೋಗ ಶಾಲಾ ತಂತ್ರಜ್ಞರುಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲಾಗಿದ್ದು ಪ್ರಾಥಮಿಕ ಆರೋಗ್ಯ ಸೇವೆಗಳನ್ನು ಒದಗಿಸಲು ಅವಶ್ಯಕ ಮೂಲಭೂತ ಆರೋಗ್ಯ ಸಲಕರಣೆಗಳು ಮತ್ತು ಉಪಭೋಗ್ಯ ವಸ್ತುಗಳು ಹಾಗೂ ತುರ್ತು ಪರಿಸ್ಥಿತಿಯ ನಿರ್ವಹಣೆಗೆ ಅಗತ್ಯವಿರುವ ಜೀವನಾವಶ್ಯಕ ಔಷಧಿಗಳೊಂದಿಗೆ ಸಜ್ಜುಗೊಳಿಸಲಾಗಿದೆ.

ಸಂಚಾರಿ ಆರೋಗ್ಯ ಘಟಕವು ಕನಿಷ್ಠ 2-3 ಆಯ್ದು ದುರ್ಗಮ ಹಾಗೂ ಸಂಪರ್ಕ ರಹಿತ ಹಳ್ಳಿಗಳಿಗೆ ಕ್ರಿಯಾ ಯೋಜನೆಯನು ರೂಪಿಸಿ ನಿರ್ದಿಷ್ಟ ದಿನಾಂಕ ಮತ್ತು ಸಮಯದಂದು ಅಲ್ಲಿಯ ಸ್ಥಳೀಯರಿಗೆ ಮುಂಗಡವಾಗಿ ತಿಳಿಸಿ ತೆರಳಿ ಸೇವೆಯನ್ನು ಒದಗಿಸಲಾಗುವುದು.

ಪ್ರತಿ 5000 ಜನಸಂಖ್ಯೆಗೆ ಒಂದರಂತೆ ಆರೋಗ್ಯ ಉಪ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಈ ಕೇಂದ್ರಗಳನ್ನು ಆಯುಷ್ಮಾನ್ ಆರೋಗ್ಯ ಕೇಂದ್ರಗಳಾಗಿ ಮೇಲ್ದರ್ಜೆಗೆ ಏರಿಸಲಾಗಿದ್ದು, ಭಾರತ ಸರ್ಕಾರದ ಮಾರ್ಗಸೂಚಿಯನ್ವಯ 12 ವಿಸ್ತರಿತಾ ಸೇವಾ ಪ್ಯಾಕೇಜ್ ನಡಿ ಪ್ರಾಥಮಿಕ ಆರೋಗ್ಯ ಆರೈಕಾ ಸೇವೆಗಳನ್ನು ನೀಡಲಾಗುತ್ತಿದೆ.

ಪ್ರಸ್ತುತ ಕಾರ್ಯಾಚರಣೆಯಲ್ಲಿರುವ ಪ್ರಾಥಮಿಕ ಆರೋಗ್ಯ ಸೇವಾ ವ್ಯವಸ್ಥೆಯು ಸೂಕ್ತವಾಗಿದ್ದು, ಪ್ರಸ್ತುತ ಕಾಲಘಟ್ಟದ ಸುಧಾರಿತ ತಂತ್ರಜ್ಞಾನವನ್ನು ಬಳಸಿಕೊಂಡು ಹಾಲಿ ಕಾರ್ಯಾಚರಣೆಯಲ್ಲಿರುವ ಸಂಚಾರಿ ಆರೋಗ್ಯ ಘಟಕಗಳಲ್ಲಿ ನೀಡಲಾಗುವ ಆರೋಗ್ಯ ಸೇವೆಗಳನ್ನು ಡಿಜಿಟಲೀಕರಣಗೊಳಿಸುವ ಪ್ರಕ್ರಿಯೆಯನ್ನು ಅಳವಡಿಸಿಕೊಳ್ಳಲಾಗುವುದು.

ಪ್ರಸ್ತುತ ಸ್ಥಿತಿಗೆ ಅನುಗುಣವಾಗಿ ಹಾಲಿ ಕಾರ್ಯಾಚರಣೆಯಲ್ಲಿರುವ ಸಂಚಾರಿ ಆರೋಗ್ಯ ಘಟಕಗಳು ಆರೋಗ್ಯ ಸೇವೆಗಳ ಬೇಡಿಕೆಯನ್ನು ಪೂರೈಸುತ್ತಿವೆ.

ಜಿಲ್ಲಾವಾರು ಸಂಚಾರಿ ಆರೋಗ್ಯ ಘಟಕಗಳ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

**ಸಂಖ್ಯೆ: ಆಕುಕ 111 ಎಸ್‌ಬಿವಿ 2026**

(ಯು.ಟಿ. ಖಾದರ್ ಫರೀದ್)  
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಹಾಗೂ  
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು